**Akashvani : Bangalore**
**01.05.2025 / 18.40 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**01.05.2025 / 18.40 hrs**

**<><*<><>*><>**

ಮುಖ್ಯಾಂಶಗಳು

**೧. ಹನ್ನೆರಡು ಸಾವಿರದ ೬೦೦ ಪೌರಕಾರ್ಮಿಕರಿಗೆ ಖಾಯಂ ನೇಮಕಾತಿ ಪತ್ರ ವಿತರಿಸಿದ ಸರ್ಕಾರ**

**೨. ಜಾತಿಗಣತಿ ಜೊತೆಗೆ ಆರ್ಥಿಕ, ಸಾಮಾಜಿಕ ಸಮೀಕ್ಷೆ ನಡೆಸುವಂತೆ ಕೇಂದ್ರ ಸರ್ಕಾರಕ್ಕೆ ಮುಖ್ಯಮಂತ್ರಿ ಸಲಹೆ**

**೩. ಕೇಂದ್ರ ಸರ್ಕಾರದ ಜನಗಣತಿಯೊಂದಿಗೆ ಜಾತಿ ಸಮೀಕ್ಷೆ ನಿರ್ಧಾರ ಸ್ವಾಗತಿಸಿದ ಬಿಜೆಪಿ**

**೪. ನಾಳೆ ಎಸ್‌ಎಸ್‌ಎಲ್‌ಸಿ ಫಲಿತಾಂಶ; ಮಧ್ಯಾಹ್ನದ ಬಳಿಕ ವೆಬ್‌ಸೈಟ್‌ನಲ್ಲಿ ಪ್ರಕಟ**

**೫. ಅಂಚೆ ಇಲಾಖೆಯಿಂದ ಓದುಗರಿಗೆ ಇಂದಿನಿಂದ 'ಜ್ಞಾನ ಪೋಸ್ಟ್' ಎಂಬ ಹೊಸ ಸೇವೆ**

**<><*<><>*><>**

ಬಿಬಿಎಂಪಿ ವ್ಯಾಪ್ತಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ೧೨ ಸಾವಿರದ ೬೦೦ ಪೌರ ಕಾರ್ಮಿಕರಿಗೆ ರಾಜ್ಯ ಸರ್ಕಾರ ಇಂದು ಖಾಯಂ ನೇಮಕಾತಿ ಪತ್ರ ವಿತರಿಸಿದೆ. ಬೆಂಗಳೂರಿನಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮತ್ತು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಪೌರಕಾರ್ಮಿಕರಿಗೆ ನೇಮಕಾತಿ ಪತ್ರಗಳನ್ನು ವಿತರಿಸಿದರು.  ಬಳಿಕ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ರಾಜ್ಯದಲ್ಲಿ ೩೮ ಸಾವಿರ ಪೌರ ಕಾರ್ಮಿಕರು ಇದ್ದು, ಅವರನ್ನು ಹಂತ ಹಂತವಾಗಿ ಖಾಯಂ ಮಾಡಲಾಗುವುದು ಎಂದು ತಿಳಿಸಿದ್ದಾರೆ. ಬಿಬಿಎಂಪಿ ಆಯುಕ್ತರಿಗೆ ಸಿಗುವ ಗೌರವ ಪೌರ ಕಾರ್ಮಿಕನಿಗೂ ಸಿಗಬೇಕು. ಖಾಯಂ ಆಗಿರುವ ಎಲ್ಲ ಪೌರ ಕಾರ್ಮಿಕರಿಗೆ ಇನ್ನು ಮುಂದೆ ಮಾಸಿಕ ೩೯ ಸಾವಿರ ವೇತನ ಸಿಗಲಿದೆ ಎಂದು ಮುಖ್ಯಮಂತ್ರಿ ಸ್ಪಷ್ಟಪಡಿಸಿದ್ದಾರೆ. ಇದೇ ವೇಳೆ ಮಾತನಾಡಿದ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಮಾತನಾಡಿ, ರಾಜ್ಯದ ಎಲ್ಲ ಪಾಲಿಕೆ, ನಗರಸಭೆ, ಪುರಸಭೆಗಳಿಲ್ಲಿರುವ ಪೌರ ಕಾರ್ಮಿಕರನ್ನು ಖಾಯಂ ಮಾಡಿ ಎಂದು ಸರ್ಕಾರಕ್ಕೆ ಸಲಹೆ ನೀಡಿದ್ದಾರೆ.

**<><*<><>*><>**

ಕೇಂದ್ರ ಸರ್ಕಾರದ ಜಾತಿ ಗಣತಿ ನಿರ್ಧಾರವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ವಾಗತಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತಾನಾಡಿದ ಅವರು ಜಾತಿ ಗಣತಿ ಜೊತೆಗೆ ಆರ್ಥಿಕ ಮತ್ತು ಸಾಮಾಜಿಕ ಸಮೀಕ್ಷೆ ನಡೆಸುವಂತೆ ಒತ್ತಾಯಿಸಿದ್ದಾರೆ. ಜನಸಂಖ್ಯೆಗೆ ಅನುಗುಣವಾಗಿ ಮೀಸಲಾತಿ ಹೆಚ್ಚಳದ ಅಗತ್ಯವನ್ನು ಅವರು ಪ್ರಸ್ತಾಪಿಸಿದ್ದಾರೆ.

**ಧ್ವನಿ : ಮುಖ್ಯಮಂತ್ರಿ ಸಿದ್ದರಾಮಯ್ಯ ( ೨೭ ಸೆಕೆಂಡ್ಸ್)**

೨೦೧೫ ರಲ್ಲಿ ೧೯೨ ಕೋಟಿ ರೂಪಾಯಿ ಖರ್ಚು ಮಾಡಿ ರಾಜ್ಯದಲ್ಲಿ  ಸಮೀಕ್ಷೆ ನಡೆಸಲಾಗಿದೆ. ಜಾತಿಗಣತಿ ವರದಿಯನ್ನು ಸಂಪುಟದಲ್ಲಿ ಮಂಡಿಸಲಾಗಿದೆ. ಸಚಿವರ ಅಭಿಪ್ರಾಯ ಪಡೆದು ಮುಂದಿನ ನಿರ್ಧಾರ ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಸ್ಪಷ್ಟಪಡಿಸಿದ್ದಾರೆ.

**<><*<><>*><>**

ದೇಶದಲ್ಲಿ ಜಾತಿ ಗಣತಿ ಮಾಡುವ ಅಧಿಕಾರ ಇರುವುದು ಕೇಂದ್ರ ಸರ್ಕಾರಕ್ಕೆ ಮಾತ್ರ ಎಂದು ಕೇಂದ್ರ ಜಲಶಕ್ತಿ ಹಾಗೂ ರೈಲ್ವೆ ರಾಜ್ಯ ಖಾತೆ ಸಚಿವ ವಿ.ಸೋಮಣ್ಣ ತಿಳಿಸಿದ್ದಾರೆ. ತುಮಕೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಒಂದು ದೇಶ, ಒಂದು ಚುನಾವಣೆ, ಮಹಿಳಾ ಮೀಸಲಾತಿ ಮಸೂದೆ, ಜಾತಿ ಗಣತಿ ಪ್ರಧಾನಿ ಪ್ರಧಾನಿಯವರ ದೂರದೃಷ್ಟಿಯ ಚಿಂತನೆಯಾಗಿದೆ ಎಂದು ಹೇಳಿದ್ದಾರೆ. ದೇಶದಲ್ಲಿ ಕಾಂಗ್ರೆಸ್ ಸರ್ಕಾರ ದಶಕಗಳ ಕಾಲ ಅಧಿಕಾರದಲ್ಲಿದ್ದರೂ ಜಾತಿ ಗಣತಿ ಏಕೆ ಮಾಡಲಿಲ್ಲ ಎಂದು ಪ್ರಶ್ನಿಸಿದ್ದಾರೆ.

**<><*<><>*><>**

ಕಾಂಗ್ರೆಸ್ ಅವಧಿಯಲ್ಲಿ ಜಾತಿ ಸಮೀಕ್ಷೆ ಯಾಕೆ ಮಾಡಲಿಲ್ಲ ಎಂದು  ಪ್ರತಿಪಕ್ಷ ನಾಯಕ ಆರ್.ಅಶೋಕ ಪ್ರಶ್ನಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರ ಸಾಮಾಜಿಕ ನ್ಯಾಯವನ್ನು ಎತ್ತಿ ಹಿಡಿದು ಜಾತಿ ಗಣತಿ ನಡೆಸಲು ತೀರ್ಮಾನಿಸಿದೆ ಎಂದು ಸಮರ್ಥಿಸಿಕೊಂಡಿದ್ದಾರೆ. ೨೦೨೯ ಕ್ಕೆ ಮಹಿಳಾ ಮೀಸಲಾತಿ ತರಲು ಪ್ರಧಾನಿ ನಿರ್ಧರಿಸಿದ್ದು, ಇದಕ್ಕೆ ಜನಗಣತಿ ಹಾಗೂ ಜಾತಿ ಸಮೀಕ್ಷೆ ನೆರವಾಗಲಿದೆ ಎಂದು ಹೇಳಿದ್ದಾರೆ.

**<><*<><>*><>**

ಕರ್ನಾಟಕ ಶಾಲಾ ಪರೀಕ್ಷಾ ಮತ್ತು ಮೌಲ್ಯಮಾಪನ ಮಂಡಳಿ ನಡೆಸಿದ ಎಸ್‌ಎಸ್‌ಎಲ್‌ಸಿ ಪರೀಕ್ಷೆ- ೧ ರ ಫಲಿತಾಂಶ ನಾಳೆ ಪ್ರಕಟವಾಗಲಿದೆ. ಶಿಕ್ಷಣ ಸಚಿವ ಮಧುಬಂಗಾರಪ್ಪ ಸುದ್ದಿಗೋಷ್ಠಿ ನಡೆಸಿ ಫಲಿತಾಂಶ ಪ್ರಕಟಿಸಲಿದ್ದಾರೆ. ಮಧ್ಯಾಹ್ನ ೧೨.೩೦ ರ ನಂತರ ವೆಬ್‌ಸೈಟ್‌ನಲ್ಲಿ

ಫಲಿತಾಂಶ ಲಭ್ಯವಾಗಲಿದೆ. karresults.nic.in ಜಾಲತಾಣದಲ್ಲಿ ಫಲಿತಾಂಶ ವೀಕ್ಷಿಸಬಹುದಾಗಿದೆ. ಎಸ್ಎಮ್ಎಸ್ಮೂಲಕವೂ ಫಲಿತಾಂಶ ವೀಕ್ಷಿಸಬಹುದಾಗಿದ್ದು, ಏಂಖ ೧೦ ಅಂತ ಬರೆದು ಸ್ಪೇಸ್ ಬಿಟ್ಟು ನೋಂದಣಿ ಸಂಖ್ಯೆ ಟೈಪ್ ಮಾಡಿ ೫೬೨೬೩ಗೆ ಸಂದೇಶ ಕಳುಹಿಸಿದರೆ, ಫಲಿತಾಂಶವನ್ನು ಅದೇ ಮೊಬೈಲ್ ಸಂಖ್ಯೆಗೆ ಕಳುಹಿಸಲಾಗುತ್ತದೆ. ಈ ಬಾರಿ ೮ ಲಕ್ಷದ ೯೬ ಸಾವಿರದ ೪೪೭ ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದರು.

**<><*<><>*><>**

ಭಾರತ ಸರ್ಕಾರದ ಅಂಚೆ ಇಲಾಖೆ "ಜ್ಞಾನ ಪೋಸ್ಟ್" ಎಂಬ ಹೆಸರಿನ ಹೊಸ ಅಂಚೆ ಸೇವೆಯನ್ನು ಇಂದಿನಿಂದ ಪ್ರಾರಂಭಿಸಿದೆ. ಇದು ವಿದ್ಯಾರ್ಥಿಗಳು, ಓದುಗರು ಮತ್ತು ಪಠ್ಯಪುಸ್ತಕ ಪ್ರಕಾಶಕರುಗಳಿಗೆ ಉಪಯುಕ್ತವಾಗುವಂತೆ ಕೈಗೆಟುಕುವ ದರದಲ್ಲಿ ಸಿಗುವ ವಿಶೇಷ ಅಂಚೆ ರವಾನೆ ಸೇವೆಯಾಗಿದೆ. ಈ ಸೇವೆಗೆ ಬಳ್ಳಾರಿ ಪ್ರಧಾನ ಅಂಚೆ ಕಚೇರಿಯಲ್ಲಿ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಡಾ. ನಿಷ್ಠಿ ರುದ್ರಪ್ಪ ಒಂದು ಪುಸ್ತಕ ರವಾನಿಸುವ ಮುಖಾಂತರ ಮೊದಲ ಗ್ರಾಹಕರಾಗಿದ್ದಾರೆ.

ಅಂಚೆ ಇಲಾಖೆ ಇಂದಿನಿಂದ ಆರಂಭಿಸಿರುವ "ಜ್ಞಾನ ಪೋಸ್ಟ್" ಸೇವೆಗೆ ಬೆಂಗಳೂರಿನಲ್ಲಿ ವರಿಷ್ಠ ಅಂಚೆ ಅಧೀಕ್ಷಕರಾದ ಸೂರ್ಯ ಯು ಅವರು ರಾಜಾಜಿನಗರದ ಅಂಚೆ ಕಚೇರಿಯಲ್ಲಿ ಚಾಲನೆ ನೀಡಿದರು. ವಿವಿಧ ಪುಸ್ತಕ ಮಳಿಗೆಗಳ ಮಾಲೀಕರು, ಪ್ರಕಾಶಕರು ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು. ದೇಶಾದ್ಯಂತ ಶೈಕ್ಷಣಿಕ, ಸಾಮಾಜಿಕ, ಸಾಂಸ್ಕೃತಿಕ ಮತ್ತು ಧಾರ್ಮಿಕ ಪುಸ್ತಕಗಳ ಸಾಗಾಣಿಕೆ ಮತ್ತು ವಿತರಣೆಯನ್ನು ಸರಳೀಕೃತಗೊಳಿಸುವ ಉದ್ದೇಶದಿಂದ ಜ್ಞಾನಪೋಸ್ಟ್ ಸೇವೆಯನ್ನು ಆರಂಭಿಸಲಾಗಿದೆ. ಇದು ಎಲ್ಲಾ ಅಂಚೆ ಕಚೇರಿಗಳಲ್ಲೂ ಇಂದಿನಿಂದ ಲಭ್ಯವಿದೆ.

**<><*<><>*><>**

ಕರ್ತವ್ಯದ ಸಮಯದಲ್ಲಿ ನಮಾಜ್ ಮಾಡಲು ರಸ್ತೆಯ ಬದಿಯಲ್ಲಿ ಬಸ್ ನಿಲ್ಲಿಸಿದ್ದಕ್ಕಾಗಿ ರಾಜ್ಯ ರಸ್ತೆ ಸಾರಿಗೆ ನಿಗಮದ ಬಸ್ ಚಾಲಕನನ್ನು ಅಮಾನತುಗೊಳಿಸಲಾಗಿದೆ. ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ನಿಗಮ ಹಾವೇರಿ ವಿಭಾಗವು ಹಾವೇರಿ ವಿಭಾಗೀಯ ನಿಯಂತ್ರಕರ ಮೂಲಕ ಅಮಾನತು ಆದೇಶ ಹೊರಡಿಸಿದೆ. ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ಮಾರ್ಗಸೂಚಿಗಳ ಪ್ರಕಾರ ನೀತಿ ಸಂಹಿತೆ ಮತ್ತು ಶಿಸ್ತನ್ನು ಉಲ್ಲಂಘಿಸಿದ್ದಕ್ಕಾಗಿ ಚಾಲಕ ಎ.ಆರ್. ಮುಲ್ಲಾ ಅವರನ್ನು ಅಮಾನತುಗೊಳಿಸಲಾಗಿದೆ. ತನಿಖೆಯಲ್ಲಿ ಮುಲ್ಲಾ ಸೇವಾ ನಿಯಮಗಳನ್ನು ಉಲ್ಲಂಘಿಸಿದ್ದಾರೆ ಎಂದು ನಿಗಮ ತಿಳಿಸಿದೆ.

<><*<><>*><>

ಗಣಿನಾಡು ಬಳ್ಳಾರಿ ಜಿಲ್ಲೆಯಲ್ಲಿ ವಿವಿಧ ಕಾರ್ಮಿಕ ಸಂಘಟನೆಗಳಿಂದ ಕಾರ್ಮಿಕ ದಿನಾಚರಣೆ ಆಚರಿಸಲಾಯಿತು. ಬಳ್ಳಾರಿ ನಗರದಲ್ಲಿ ಬೃಹತ್ ಮೆರವಣಿಗೆ ನಡೆಸಿ ಸಿಹಿ ಹಂಚಿ ಕಾರ್ಮಿಕರು ಸಂಭ್ರಮಿಸಿದರು. ಹೊಸಪೇಟೆಯ ಸಿಐಟಿಯು ಕಛೇರಿ ಶ್ರಮಿಕ ಭವನದ ಮುಂದೆ ಕಾರ್ಮಿಕ ದಿನಾಚರಣೆ ನಡೆಸಲಾಯಿತು. ಕಾರ್ಮಿಕರ ದಿನಾಚರಣೆಯನ್ನು ಹುಬ್ಬಳ್ಳಿ ಮಹಾನಗರ ಪಾಲಿಕೆಯಲ್ಲಿ ಕೇಕ್ ಕತ್ತರಿಸಿ ಆಚರಿಸಲಾಯಿತು. ಜೊತೆಗೆ ಉಚಿತ ಕಾನೂನು ಸೇವೆಗಳ ಬಗ್ಗೆ ಜಾಗೃತಿ ಸಭೆ ನಡೆಯಿತು. ದೇಶದ ಐಕ್ಯತೆ, ಸಮಾನತೆಗಾಗಿ ನಾವೆಲ್ಲ ಮತ್ತೊಮ್ಮೆ ಒಗ್ಗಟ್ಟಾಗಿ ಶ್ರಮಿಸಬೇಕಾಗಿದೆ ಎಂದು ಸಿಐಟಿಯು ಕೋಲಾರ ಜಿಲ್ಲಾ ಖಜಾಂಚಿ ಹೆಚ್.ಬಿ ಕೃಷ್ಣಪ್ಪ ತಿಳಿಸಿದ್ದಾರೆ. ಕೋಲಾರ ನಗರದ ಪಾಲಸಂದ್ರ ಲೇಔಟ್ ನಲ್ಲಿ ಸಿಐಟಿಯು ವತಿಯಿಂದ ಕಾರ್ಮಿಕ ದಿನಾಚರಣೆ ಪ್ರಯುಕ್ತ ನಡೆದ ಧ್ವಜಾರೋಹಣದಲ್ಲಿ ಭಾಗವಹಿಸಿ ಮಾತನಾಡಿದ ಅವರು ನೂರಾರು ವರ್ಷಗಳ ಹಿಂದೆ ಕಾರ್ಮಿಕ ವರ್ಗ ಸಂಘಟಿತವಾಗಿರಲಿಲ್ಲ ಎಂದು ಹೇಳಿದ್ದಾರೆ.

<><*<><>*><>

ಪೆಹಲ್ಗಾಮ್‌ನಲ್ಲಿ ಭಯೋತ್ಪಾದಕರ ದಾಳಿಯಿಂದ ಮೃತಪಟ್ಟ ಕುಟುಂಬಗಳಿಗೆ ಚಿಕ್ಕಮಗಳೂರು ಜಿಲ್ಲೆಯ ಪ್ರಸಿದ್ಧ ಶೃಂಗೇರಿ ಶಾರದಾ ಮಠವು ತಲಾ ೨ ಲಕ್ಷ ರೂಪಾಯಿ ಪರಿಹಾರ ಘೋಷಿಸಿದೆ. ದಾಳಿಯಲ್ಲಿ ಮೃತಪಟ್ಟ ಒಟ್ಟು ೨೬ ಸದಸ್ಯರ ಕುಟುಂಬಗಳಿಗೆ ಒಟ್ಟು ೫೨ ಲಕ್ಷ ರೂಪಾಯಿ ಪರಿಹಾರವನ್ನು ಘೋಷಣೆ ಮಾಡಲಾಗಿದೆ. ಶೃಂಗೇರಿ ಶಾರದ ಮಠದಲ್ಲಿ ಇಂದು ನಡೆದ ಅನುರಾಗ ಸಂದೇಶ ಕಾರ್ಯಕ್ರಮದಲ್ಲಿ ಮಾತನಾಡಿದ ಮಠದ ಕಿರಿಯ ಜಗದ್ಗುರುಗಳಾದ ಶ್ರೀ ವಿಧುಶೇಖರ ಭಾರತಿತೀರ್ಥ ಸ್ವಾಮೀಜಿ ಕಾಶ್ಮೀರದ ಪಹಲ್ಗಾಮ್ ನಲ್ಲಿ ನಡೆದ ಈ ಘಟನೆ ದುಖಃ ತಂದಿದೆ. ಹೇಳಿದ್ದಾರೆ.

<><*<><>*><>

ಮಂಗಳೂರಿನ ಕುಡುಪುವಿನಲ್ಲಿ ಗುಂಪಿನಿಂದ ಹಲ್ಲೆಗೊಳಗಾಗಿ ಯುವಕ ಮೃತಪಟ್ಟಿರುವ ಪ್ರಕರಣದ ತನಿಖೆಗೆ ವಿಶೇಷ ತನಿಖಾ ಸಂಸ್ಥೆ-ಎಸ್‌ಐಟಿ ರಚಿಸಬೇಕು ಎಂದು ಮಾಜಿ ಸಚಿವ ರಮಾನಾಥ ರೈ ರಾಜ್ಯ ಸರ್ಕಾರವನ್ನು ಆಗ್ರಹಿಸಿದ್ದಾರೆ. ಮಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹತ್ಯೆ ಪ್ರಕರಣ ಅತ್ಯಂತ ಗಂಭೀರವಾದುದು. ಸೂಕ್ತ ಕ್ರಮ ಕೈಗೊಂಡಲ್ಲಿ ಮುಂದಿನ ದಿನಗಳಲ್ಲಿ ಶಾಂತಿ ನೆಲೆಸಲು ಸಾಧ್ಯ ಎಂದರು.

<><*<><>*><>

ವಿಜಯಪುರ ಜಿಲ್ಲೆಯ ನಗರ ಹಾಗೂ ಗ್ರಾಮೀಣ ಭಾಗದಲ್ಲಿ ಬೇಸಿಗೆಯಲ್ಲಿ ಕುಡಿಯುವ ನೀರಿನ ಸಮಸ್ಯೆಯಾಗದಂತೆ ಕ್ರಮ ವಹಿಸಬೇಕು ಎಂದು ವಿಜಯಪುರ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಉಜ್ವಲ್‌ಕುಮಾರ್ ಘೋಷ್ ಸೂಚನೆ ನೀಡಿದ್ದಾರೆ. ವಿಜಯಪುರದಲ್ಲಿ ನಡೆದ ಕ್ರಿಯಾ ಯೋಜನೆ ಪರಿಶೀಲನೆ ಹಾಗೂ ಜಿಲ್ಲಾ ಮಟ್ಟದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ನಗರ ಪ್ರದೇಶದ ಎಲ್ಲ ವಾರ್ಡ್‌ಗಳಿಗೆ ಕುಡಿಯುವ ನೀರು ಪೂರೈಸಬೇಕು ಎಂದು ತಿಳಿಸಿದ್ದಾರೆ.

**<><*<><>*><>=**

ರಾಜ್ಯದ ಕರಾವಳಿ ಮತ್ತು ದಕ್ಷಿಣ ಒಳನಾಡಿನ ಕೆಲವು ಕಡೆಗಳಲ್ಲಿ ಮಳೆಯಾಗಿದೆ. ಮಂಡ್ಯ ಜಿಲ್ಲೆಯ ಕೆ.ಆರ್.ಪೇಟೆಯಲ್ಲಿ ೧೦, ಚಿತ್ರದುರ್ಗ ೫ ಸೆಂಟಿಮೀಟರ್ ಮಳೆಯಾಗಿದೆ. ದಕ್ಷಿಣ ಕನ್ನಡ ಹಾಗೂ ಉಡುಪಿ ಜಿಲ್ಲೆಯಾದ್ಯಂತ ಕೆಲವೆಡೆ ಮಳೆಯಾಗುವ ನಿರೀಕ್ಷೆಯಿದೆ. ಬೆಂಗಳೂರಿನಲ್ಲಿ ಮೋಡ ಕವಿದ ವಾತಾವರಣವಿದ್ದು, ಇಂದೂ ಕೂಡ ಗುಡುಗು ಸಹಿತ ಸಾಧಾರಣ ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ಮುನ್ನೆಚ್ಚರಿಕೆ ನೀಡಿದೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**